**ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಕನಕಪುರ**

**ಸಿ.ಸಿ ನಂ.871/2013**

ದಿನಾಂಕ**:11.12.2025** ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

ಚಾಸಾ**-7** ಪ್ರಾಸಾ**-5**

| | |
|---|---|
| ಹೆಸರು | - ಹೆಚ್ ಪಿ ಗಿರೀಶ್ |
| ತಂದೆ / ಗಂಡನ ಹೆಸರು | - ಪಟೇಲ್ ಪುಟ್ಟೇಗೌಡ |
| ವಯಸ್ಸು | - **45** |
| ಉದ್ಯೋಗ | - ವ್ಯವಸಾಯ |
| ವಿಳಾಸ | - ಹೆಗ್ಗನೂರು |

**ಮುಖ್ಯವಿಚಾರಣೆ : ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರಿಂದಃ-**

ನ್ಯಾಯಾಲಯದ ಮುಂದಿರುವ ಆರೋಪಿತ ನನಗೆ ಪರಿಚಯ ಇಲ್ಲ.

ಪೊಲೀಸರು ನನ್ನ ಸಮಕ್ಷಮ ಪಂಚನಾಮೆ ಮಾಡಿ ಏನನ್ನು ವಶಪಡಿಸಿಕೊಂಡಿರುವುದಿಲ್ಲ.

ಸಾಕ್ಷಿ ಪಂಚನಾಮೆಯನ್ನು ನೋಡಿ ಅದರಲ್ಲಿರುವ ಸಹಿಯನ್ನು ನೋಡಿ ತನ್ನ ಸಹಿ ಎಂದು ಗುರುತಿಸಿದ್ದು ಸದರಿ **ಪಂಚನಾಮೆಯನ್ನು** ಈಗಾಗಲೇ ನಿಪಿ**-4** ಎಂದು ಗುರುತಿಸಿದ್ದು , ಸಾಕ್ಷಿ ಸಹಿಯನ್ನು ನಿಪಿ**-4(**ಬಿ**)** ಎಂದು ಗುರುತಿಸಲಾಯಿತು.

ನಿಪಿ**-4** ರಲ್ಲಿ ಏನು ಬರೆದಿದೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರು ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ದಿಃ **17.03.2013** ರಂದು ಸಂಜೆ **3.45** ರಿಂದ **4.30** ಗಂಟೆ ಸಮಯದಲ್ಲಿ ನನ್ನ ಹಾಗೂ ಚಾಸಾ**-1** ಮತ್ತು **6** ರವರ ಸಮಕ್ಷಮ ಪೊಲೀಸರು ನಿಪಿ**-4** ರ

ಪ್ರಕಾರ ಪಂಚನಾಮೆ ಮಾಡಿ **1** ಖಾಖಿ ಸಮವಸ್ತ್ರದ ತುಂಬು ತೋಳಿನ ಶರ್ಟ ನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ**.**

ಆರೋಪಿಯೊಂದಿಗೆ ರಾಜಿ ಮಾಡಿಕೊಂಡಿರುವ ಕಾರಣ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರಿಂದಃ**

**ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

**ಮರುವಿಚಾರಣೆ ಇಲ್ಲ.**

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ಧೃಢೀಕರಿಸುತ್ತೇನೆ)

ಓದಿ ಹೇಳಿ ಕೇಳಿ ಸರಿ ಇದೆ,

**ಮೂರನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ., ಕನಕಪುರ.**